All India Radio: Bangalore
National Bulletin In Kannada
23.09.2025  07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

- ಪ್ರಸ್ತುತ ಹಣಕಾಸು ವರ್ಷದಲ್ಲಿ ಪ್ರಧಾನಮಂತ್ರಿ ಉಜ್ವಲ ಯೋಜನೆಯಡಿ ೨೫ ಲಕ್ಷ ಹೆಚ್ಚುವರಿ ಎಲ್‌ಪಿಜಿ ಸಂಪರ್ಕ ಒದಗಿಸಲು ಕೇಂದ್ರ ಸರ್ಕಾರ ನಿರ್ಧಾರ
- ಇಂದು ೧೦ನೇ ರಾಷ್ಟ್ರೀಯ ಆಯುರ್ವೇದ ದಿನ : ಗೋವಾದ ಅಖಿಲ ಭಾರತ ಆಯುರ್ವೇದ ಸಂಸ್ಥೆಯಲ್ಲಿ ಪ್ರಧಾನ ಕಾರ್ಯಕ್ರಮ
- ನವದೆಹಲಿಯಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ೨೦೨೩ನೇ ಸಾಲಿನ ೭೧ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ
- ಏಷ್ಯಾ ಕಪ್ ಟಿ-೨೦ ಕ್ರಿಕೆಟ್ : ಇಂದು ಪಾಕಿಸ್ತಾನ-ಶ್ರೀಲಂಕಾ ಮುಖಾಮುಖಿ

<><><><>

ಪ್ರಸ್ತುತ ಹಣಕಾಸು ವರ್ಷದಲ್ಲಿ ಪ್ರಧಾನ ಮಂತ್ರಿ ಉಜ್ವಲ ಯೋಜನೆಯಡಿ ೨೫ ಲಕ್ಷ ಹೆಚ್ಚುವರಿ ಎಲ್‌ಪಿಜಿ ಸಂಪರ್ಕಗಳನ್ನು ಒದಗಿಸಲು ಸರ್ಕಾರ ನಿರ್ಧರಿಸಿದೆ ಎಂದು ಕೇಂದ್ರ ಸಚಿವ ಹರ್ದೀಪ್ ಸಿಂಗ್ ಪುರಿ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೫ ಲಕ್ಷ ಹೊಸ ಎಲ್‌ಪಿಜಿ ಪ್ರತಿ ಸಂಪರ್ಕಕ್ಕೂ ಸರ್ಕಾರ ಎರಡು ಸಾವಿರ ರೂಪಾಯಿಗಳಿಗಿಂತ ಹೆಚ್ಚು ಖರ್ಚು ಮಾಡಲಿದೆ ಎಂದು ಮಾಹಿತಿ ನೀಡಿದರು. ನವರಾತ್ರಿಯ ಮೊದಲ ದಿನವಾದ ನಿನ್ನೆ ಮಹಿಳಾ ಫಲಾನುಭವಿಗಳಿಗೆ ಶುಭಾಶಯಗಳನ್ನು ತಿಳಿಸುತ್ತಾ, ಪ್ರಧಾನಿ ನರೇಂದ್ರ ಮೋದಿ ಅವರು ಸರ್ಕಾರದ ಈ ಕ್ರಮವು ಸಂತಸವನ್ನು ತರುವುದಲ್ಲದೆ, ಮಹಿಳಾ ಸಬಲೀಕರಣದ ಸಂಕಲ್ಪವನ್ನು ಬಲಪಡಿಸುತ್ತದೆ ಎಂದು ಹೇಳಿದರು. ಈ ವಿಸ್ತರಣೆಯೊಂದಿಗೆ, ಉಜ್ವಲ ಕುಟುಂಬದ ಸದಸ್ಯರ ಸಂಖ್ಯೆ ೧೦ ಕೋಟಿ ೫೮ ಲಕ್ಷಕ್ಕೆ ಏರಿಕೆಯಾಗಲಿದ್ದು, ಎಲ್ಲಾ ಮಹಿಳೆಯರಿಗೆ ಶುದ್ಧ ಅಡುಗೆ ಇಂಧನ ಸುಲಭವಾಗಿ ಲಭ್ಯವಾಗುವಂತೆ ಪ್ರಧಾನಿ ಖಚಿತಪಡಿಸಿದ್ದಾರೆ ಎಂದು ಸಚಿವರು ಹೇಳಿದರು.

<><><><>

೧೦ನೇ ರಾಷ್ಟ್ರೀಯ ಆಯುರ್ವೇದ ದಿನವನ್ನು ಇಂದು ಗೋವಾದ ಅಖಿಲ ಭಾರತ ಆಯುರ್ವೇದ ಸಂಸ್ಥೆಯಲ್ಲಿ ಆಚರಿಸಲಾಗುವುದು. ಇದು ಸಾಂಪ್ರದಾಯಿಕ ಭಾರತೀಯ ಔಷಧದ ಜಾಗತಿಕ ಪ್ರಚಾರದಲ್ಲಿ ಒಂದು ಐತಿಹಾಸಿಕ ಮೈಲಿಗಲ್ಲಾಗಿದೆ. ಇದನ್ನು ಆಯುಷ್ ಸಚಿವಾಲಯದ ಕೇಂದ್ರ ರಾಜ್ಯ ಸಚಿವ ಪ್ರತಾಪರಾವ್ ಜಾಧವ್ ಉದ್ಘಾಟಿಸಲಿದ್ದಾರೆ. ಕೇಂದ್ರ ಇಂಧನ ಸಚಿವಾಲಯ ಮತ್ತು ಹೊಸ ಹಾಗೂ ನವೀಕರಿಸಬಹುದಾದ ಇಂಧನ ಸಚಿವಾಲಯದ ರಾಜ್ಯ ಸಚಿವ ಶ್ರೀಪಾದ್ ಯೆಸ್ಸೊ ನಾಯಕ್ ಸಹ ಈ ಸಂದರ್ಭದಲ್ಲಿ ಉಪಸ್ಥಿತರಿರುತ್ತಾರೆ. ಈ ವರ್ಷದ ಆಯುರ್ವೇದ ದಿನವು "ಜನರಿಗಾಗಿ ಆಯುರ್ವೇದ, ಗ್ರಹಕ್ಕಾಗಿ ಆಯುರ್ವೇದ" ಎಂಬ ಧ್ಯೇಯವಾಕ್ಯದೊಂದಿಗೆ ಆಯುರ್ವೇದದ ಶಾಶ್ವತ ಪರಂಪರೆ ಮತ್ತು ಆರೋಗ್ಯ ಹಾಗೂ ಪರಿಸರ ಸುಸ್ಥಿರತೆಗೆ ಅದರ ಕೊಡುಗೆಯನ್ನು ಪ್ರತಿಬಿಂಬಿಸಲಿದೆ. ಈ ಸಂದರ್ಭದಲ್ಲಿ ಆಯುರ್ವೇದ ಕ್ಷೇತ್ರದಲ್ಲಿನ ವಿಶಿಷ್ಟ ಸೇವೆಗಾಗಿ ೨೦೨೫ರ ರಾಷ್ಟ್ರೀಯ ಧನ್ವಂತರಿ ಆಯುರ್ವೇದ ಪ್ರಶಸ್ತಿಗಳನ್ನು ನೀಡಲಾಗುವುದು. ಈ ಕಾರ್ಯಕ್ರಮದಲ್ಲಿ ಹಲವಾರು ಯೋಜನೆ ಮತ್ತು ಸೌಲಭ್ಯಗಳ ಉದ್ಘಾಟನೆಯೂ ನಡೆಯಲಿದೆ.

<><><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ನವದೆಹಲಿಯಲ್ಲಿ ೨೦೨೩ನೇ ಸಾಲಿನ ೭೧ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಈ ಸಂದರ್ಭದಲ್ಲಿ, ಪ್ರಸಿದ್ಧ ನಟ, ನಿರ್ದೇಶಕ ಮತ್ತು ನಿರ್ಮಾಪಕ ಮೋಹನ್ ಲಾಲ್ ಅವರಿಗೆ ಸಿನಿಮಾ ಕ್ಷೇತ್ರದ ಅತ್ಯುನ್ನತ ಮನ್ನಣೆಯಾದ ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುವುದು. ಚಲನಚಿತ್ರ ನಿರ್ಮಾಣ, ಕಥೆ ಹೇಳುವಿಕೆ ಮತ್ತು ನಟನೆಯಲ್ಲಿನ ಶ್ರೇಷ್ಠತೆಯನ್ನು ಗುರುತಿಸಲು ೨೦೨೩ನೇ ಸಾಲಿನ ೭೧ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿಗಳನ್ನು ವಿವಿಧ ವಿಭಾಗಗಳಲ್ಲಿ ನೀಡಲಾಗುತ್ತದೆ. ಅತ್ಯುತ್ತಮ ಚಲನಚಿತ್ರ ಪ್ರಶಸ್ತಿಯನ್ನು 'ಟ್ವೆಲ್ತ್ ಫೇಲ್' ಹಿಂದಿ ಚಿತ್ರಕ್ಕೆ ನೀಡಲಾಗುವುದು. ಹಾಗೂ ಅತ್ಯುತ್ತಮ ಹಿಂದಿ ಚಲನಚಿತ್ರ ಪ್ರಶಸ್ತಿಯನ್ನು 'ಕಥಲ್: ಎ ಜ್ಯಾಕ್‌ಫ್ರೂಟ್ ಮಿಸ್ಟರಿ' ಚಿತ್ರಕ್ಕೆ ನೀಡಲಾಗುವುದು. ಅತ್ಯುತ್ತಮ ನಟ ವಿಭಾಗದಲ್ಲಿ, ಜವಾನ್ ಚಿತ್ರಕ್ಕಾಗಿ ನಟ ಶಾರುಖ್ ಖಾನ್ ಮತ್ತು 'ಟ್ವೆಲ್ತ್ ಫೇಲ್' ಚಿತ್ರಕ್ಕಾಗಿ ನಟ ವಿಕ್ರಾಂತ್ ಮಾಸ್ಸಿ ಅವರಿಗೆ ಪ್ರಶಸ್ತಿ ನೀಡಲಾಗುವುದು.

'ಮಿಸ್ಸೆಸ್ ಚಟರ್ಜಿ ವರ್ಸಸ್ ನಾರ್ವೆ' ಚಿತ್ರದ ಅಭಿನಯಕ್ಕಾಗಿ ನಟಿ ರಾಣಿ ಮುಖರ್ಜಿ ಅವರಿಗೆ ಅತ್ಯುತ್ತಮ ನಟಿ ಪ್ರಶಸ್ತಿ ನೀಡಲಾಗುವುದು. ಸುದೀಪ್ತೋ ಸೇನ್ ಅವರ 'ದಿ ಕೇರಳ ಸ್ಟೋರಿ' ಚಿತ್ರಕ್ಕೆ ಅತ್ಯುತ್ತಮ ನಿರ್ದೇಶನ ಪ್ರಶಸ್ತಿ ಮತ್ತು ಹಿಂದಿ ಚಿತ್ರ 'ರಾಕಿ ಔರ್ ರಾಣಿ ಕಿ ಪ್ರೇಮ್ ಕಹಾನಿ' ಗೆ ಉತ್ತಮ ಮನರಂಜನೆ ನೀಡುವ ಅತ್ಯುತ್ತಮ ಜನಪ್ರಿಯ ಚಿತ್ರ ಪ್ರಶಸ್ತಿ ನೀಡಲಾಗುವುದು. ಹಿಂದಿ ಚಿತ್ರ ಜವಾನ್ ಮತ್ತು ತೆಲುಗು ಚಿತ್ರ ಬೇಬಿಯ ಹಾಡುಗಳಿಗಾಗಿ ಶಿಲ್ಪಾ ರಾವ್ ಮತ್ತು ಪಿವಿಎನ್ಎಸ್ ರೋಹಿತ್ ಅವರಿಗೆ ಅತ್ಯುತ್ತಮ ಹಿನ್ನೆಲೆ ಗಾಯಕ ಪ್ರಶಸ್ತಿ ನೀಡಲಾಗುವುದು.

<><><><>

ಗುಜರಾತ್‌ನ ಗಾಂಧಿನಗರದ ಮಹಾತ್ಮ ಮಂದಿರದಲ್ಲಿ ಸ್ಟಾರ್ಟ್‌ಅಪ್ ಕಾನ್ಕ್ಲೇವ್ ೨೦೨೫ ಅನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಉದ್ಘಾಟಿಸಲಿದ್ದಾರೆ. ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಮತ್ತು ರಾಜ್ಯ ಉನ್ನತ ಮತ್ತು ತಾಂತ್ರಿಕ ಶಿಕ್ಷಣ ಸಚಿವ ಋಷಿಕೇಶ್ ಪಟೇಲ್ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ರಾಜ್ಯ ಶಿಕ್ಷಣ ಇಲಾಖೆ ಆಯೋಜಿಸಿರುವ ಎರಡು ದಿನಗಳ ಈ ಕಾರ್ಯಕ್ರಮದಲ್ಲಿ ೧ ಸಾವಿರಕ್ಕೂ ಹೆಚ್ಚು ಸ್ಟಾರ್ಟ್‌ಅಪ್‌ಗಳು, ೫ ಸಾವಿರ ನಾವೀನ್ಯಕಾರರು, ೧೦೦ ಉದ್ಯಮ ಮಾರ್ಗದರ್ಶಕರು, ೫೦ಕ್ಕೂ ಹೆಚ್ಚು ಸಾಹಸೋದ್ಯಮ ನಿಧಿಗಳು ಮತ್ತು ಪ್ರಮುಖ ನೀತಿ ನಿರೂಪಕರು ಒಂದೇ ವೇದಿಕೆಯಲ್ಲಿ ಭಾಗವಹಿಸಲಿದ್ದಾರೆ. ಸ್ಟಾರ್ಟ್‌ಅಪ್ ಇಂಡಿಯಾ, ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯ ಆಯ್ಕೆ ಮಾಡಿದವುಗಳು ಮತ್ತು ರಕ್ಷಣಾ ಶ್ರೇಷ್ಠತೆಗಾಗಿ ನಾವೀನ್ಯತೆಗಳು ಸೇರಿದಂತೆ ೨೦ ರಾಜ್ಯಗಳಿಂದ ೧೭೦ಕ್ಕೂ ಹೆಚ್ಚು ಸ್ಟಾರ್ಟ್‌ಅಪ್‌ಗಳನ್ನು ಈ ಸಮಾವೇಶದಲ್ಲಿ ಪ್ರದರ್ಶಿಸಲಾಗುವುದು. ರಾಜ್ಯ ಸರ್ಕಾರವು ಸ್ಟಾರ್ಟ್‌ಅಪ್‌ಗಳು, ಹೂಡಿಕೆದಾರರು ಮತ್ತು ಹಣಕಾಸು ಸಂಸ್ಥೆಗಳ ನಡುವೆ ೫೦ ಒಪ್ಪಂದಗಳಿಗೆ ಸಹಿ ಹಾಕಲು ಅನುಕೂಲ ಮಾಡಿಕೊಡುವುದರ ಜೊತೆಗೆ ಆಯ್ದ ಉದ್ಯಮಗಳಿಗೆ ಹಣಕಾಸಿನ ಚೆಕ್‌ಗಳು ಮತ್ತು ಉದ್ದೇಶ ಪತ್ರಗಳ ವಿತರಣೆ ಮಾಡಲಾಗುವುದು.

<><><><>

ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಧ್ಯೇಯದೊಂದಿಗೆ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ದೇಶದಲ್ಲಿ ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿರತವಾಗಿ ಶ್ರಮಿಸುತ್ತಿದೆ.

ಈ ಹಿನ್ನೆಲೆಯಲ್ಲಿ ಆಕಾಶವಾಣಿ ಪ್ರಸ್ತುತಪಡಿಸುತ್ತಿರುವ ವಿಶೇಷ ಸರಣಿ - "ಸೇವಾ ಪರ್ವ" ದಲ್ಲಿಂದು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಲಕ್ಷಾಂತರ ಜನರ ಬದುಕನ್ನು ಸುಲಭಗೊಳಿಸುವ ನಿಟ್ಟಿನಲ್ಲಿ ಅಸಂಘಟಿತ ವಲಯದಲ್ಲಿ ಕೆಲಸ ಮಾಡುವವರನ್ನು ಸಬಲೀಕರಣಗೊಳಿಸುವ ಜವಾಬ್ದಾರಿಯನ್ನು ಸರ್ಕಾರ ವಹಿಸಿಕೊಂಡಿದೆ ಎಂಬುದರ ಕುರಿತ ಒಂದು ವಿಶೇಷ ವರದಿ ಇದೀಗ ಮೂಡಿಬರಲಿದೆ. ಜಿಡಿಪಿಗೆ ಸುಮಾರು ಶೇಕಡ ೪೫ ರಷ್ಟು ಕೊಡುಗೆ ನೀಡುವ ಅನೌಪಚಾರಿಕ ವಲಯವು ಭಾರತೀಯ ಆರ್ಥಿಕತೆಯಲ್ಲಿ ಪ್ರಮುಖ ಪಾಲುದಾರಿಕೆ ಹೊಂದಿದೆ. ಪ್ರಧಾನಿ ಮೋದಿಯವರ ನೇತೃತ್ವದಲ್ಲಿ, ಅಸಂಘಟಿತ ವಲಯದಲ್ಲಿ ಕೆಲಸ ಮಾಡುವವರನ್ನು ಸಬಲೀಕರಣಗೊಳಿಸುವ ಜವಾಬ್ದಾರಿಯನ್ನು ಸರ್ಕಾರ ವಹಿಸಿಕೊಂಡಿದೆ. ಪಿಎಂ ಬೀದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿ-ಪಿಎಂ ಸ್ವನಿಧಿ ಯೋಜನೆಯು ಬೀದಿ ವ್ಯಾಪಾರಿಗಳಿಗೆ ಕಾರ್ಯನಿರತ ಬಂಡವಾಳ ಸಾಲವನ್ನು ಸುಗಮಗೊಳಿಸುತ್ತದೆ ಮತ್ತು ಡಿಜಿಟಲ್ ಪಾವತಿಗಳಿಗೆ ಕ್ಯಾಶ್‌ಬ್ಯಾಕ್‌ನಂತಹ ವೈಶಿಷ್ಟ್ಯಗಳನ್ನು ಹೊಂದಿದೆ. ಕೋವಿಡ್-೧೯ ಸಾಂಕ್ರಾಮಿಕ ರೋಗದಿಂದ ಬಾಧಿತರಾದ ಬೀದಿ ವ್ಯಾಪಾರಿಗಳಿಗೆ ಸಹಾಯ ಮಾಡಲು ಜೂನ್ ೨೦೨೦ ರಲ್ಲಿ ಪ್ರಾರಂಭಿಸಲಾದ ಈ ಯೋಜನೆಯನ್ನು ಈಗ ೨೦೩೦ ರವರೆಗೆ ವಿಸ್ತರಿಸಲಾಗಿದೆ. ಇ-ಶ್ರಮ್ ಪೋರ್ಟಲ್ ಅಸಂಘಟಿತ ಕಾರ್ಮಿಕರ ರಾಷ್ಟ್ರೀಯ ಡೇಟಾಬೇಸ್ ಆಗಿದ್ದು, ಅದು ಸಾಮಾಜಿಕ ಭದ್ರತಾ ಯೋಜನೆಗಳ ಉದ್ದೇಶಿತ ವಿತರಣೆಯನ್ನು ಸಕ್ರಿಯಗೊಳಿಸುತ್ತದೆ. ಸೂಕ್ತವಾದ ಉದ್ಯೋಗಾವಕಾಶಗಳು, ಕೌಶಲ್ಯ ಅವಕಾಶಗಳನ್ನು ಹುಡುಕಲು ಮತ್ತು ಸಾಮಾಜಿಕ ಭದ್ರತಾ ಪ್ರಯೋಜನಗಳನ್ನು ಪಡೆಯಲು ಸಹಾಯ ಮಾಡುವ ಇತರ ಸೌಲಭ್ಯಗಳೊಂದಿಗೆ ಈ ಪೋರ್ಟಲ್ ಅನ್ನು ಸಂಯೋಜಿಸಲಾಗಿದೆ. ಪಿಎಂ ಶ್ರಮ ಯೋಗಿ ಮಾನ್-ಧನ್ ಯೋಜನೆಯು ಅಸಂಘಟಿತ ಕಾರ್ಮಿಕರಿಗೆ ಪಿಂಚಣಿ ಯೋಜನೆಯಾಗಿದ್ದು, ಭಾರತ ಸರ್ಕಾರವು ೫೦ ಪ್ರತಿಶತದಷ್ಟು ಕೊಡುಗೆಯನ್ನು ನೀಡುತ್ತದೆ ಮತ್ತು ಉಳಿದವು ಕಾರ್ಮಿಕರಿಂದ ಭರಿಸಲ್ಪಡುತ್ತದೆ.

ಮೋದಿ ಸರ್ಕಾರದ ವಿವಿಧ ಉಪಕ್ರಮಗಳು ವಿತರಣಾ ಅಂತರವನ್ನು ಕಡಿಮೆ ಮಾಡುವುದು, ಕಾರ್ಮಿಕರು ಪ್ರಯೋಜನಗಳು, ಸಾಲ ಮತ್ತು ತರಬೇತಿಯನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳುವುದು, ಇದರಿಂದಾಗಿ ಅನೌಪಚಾರಿಕ ವಲಯದಲ್ಲಿ ಕೆಲಸ ಮಾಡುವವರಿಗೆ ಆರ್ಥಿಕ ಬೆಳವಣಿಗೆ ಮತ್ತು ಸ್ಥಿರತೆಯನ್ನು ಒದಗಿಸುವುದನ್ನು ಒಳಗೊಂಡಿದೆ.

<><><><>

ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ಅಧಿವೇಶನದ ಸಂದರ್ಭದಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಭಾರತಕ್ಕೆ ಅಮೆರಿಕದ ರಾಯಭಾರಿಯಾಗಿ ನೇಮಕಗೊಂಡಿರುವ ಸೆರ್ಗಿಯೊ ಗೋರ್ ಅವರನ್ನು ಭೇಟಿ ಮಾಡಿದರು ಮತ್ತು ಉಭಯ ನಾಯಕರು ದ್ವಿಪಕ್ಷೀಯ ಸಂಬಂಧದ ಯಶಸ್ಸನ್ನು ಉತ್ತೇಜಿಸಲು ಎದುರು ನೋಡುತ್ತಿದ್ದಾರೆ. ಇದಕ್ಕೂ ಮೊದಲು ಅವರು, ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರನ್ನು ಭೇಟಿ ಮಾಡಿ, ‘ಪ್ರಸ್ತುತ ಕಾಳಜಿ"ಯ ಹಲವಾರು ದ್ವಿಪಕ್ಷೀಯ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಕುರಿತು ಚರ್ಚಿಸಿದರು. ಬಳಿಕ ಅವರು, ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ೮೦ನೇ ಅಧಿವೇಶನದ ಸಂದರ್ಭದಲ್ಲಿ ಲೊಟ್ಟೆ ನ್ಯೂಯಾರ್ಕ್ ಅರಮನೆಯಲ್ಲಿ ನಡೆದ ಸಭೆಯಲ್ಲಿ ಉನ್ನತ ಮಟ್ಟದ ಯುಎನ್‌ಜಿಎ ದ್ವಿಪಕ್ಷೀಯ ಮತ್ತು ಬಹುಪಕ್ಷೀಯ ಸಭೆಗಳ ಸರಣಿಯನ್ನು ನಡೆಸಲಿದ್ದಾರೆ. ಇದೇ ೨೭ ರಂದು ಐಕಾನಿಕ್ ಹಸಿರು ಯುಎನ್‌ಜಿಎ ವೇದಿಕೆಯಿಂದ ಸಾಮಾನ್ಯ ಚರ್ಚೆಯಲ್ಲಿ ರಾಷ್ಟ್ರೀಯ ಹೇಳಿಕೆಯನ್ನು ನೀಡಲಿದ್ದಾರೆ.

<><><><>

ಯುಎಇಯ ಅಬುಧಾಬಿಯ ಶೇಖ್ ಜಾಯೆದ್ ಕ್ರೀಡಾಂಗಣದಲ್ಲಿ ನಡೆಯಲಿರುವ ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ಇಂದು ಪಾಕಿಸ್ತಾನ ತಂಡವು ಸೂಪರ್ ಫೋರ್ ಪಂದ್ಯದಲ್ಲಿ ಶ್ರೀಲಂಕಾ ತಂಡವನ್ನು ಎದುರಿಸಲಿದೆ. ಈ ಪಂದ್ಯವು ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಭಾರತ ಮತ್ತು ಬಾಂಗ್ಲಾದೇಶ ಈಗಾಗಲೇ ತಲಾ ಎರಡು ಅಂಕಗಳನ್ನು ಗಳಿಸಿರುವುದರಿಂದ, ಪಾಕಿಸ್ತಾನ ಮತ್ತು ಶ್ರೀಲಂಕಾ ಇನ್ನೂ ತಮ್ಮ ಸೂಪರ್ ಫೋರ್ ಖಾತೆಯನ್ನು ತೆರೆದಿಲ್ಲ. ಭಾರತದ ವಿರುದ್ಧ ಸೋತ ನಂತರ ಪಾಕಿಸ್ತಾನ, ಏಷ್ಯಾ ಕಪ್‌ನಲ್ಲಿ ಸತತ ಸೋಲುಗಳು ಮತ್ತು ಸೂಪರ್ ಫೋರ್ ಆರಂಭಿಕ ಪಂದ್ಯದಲ್ಲಿ ಆರು ವಿಕೆಟ್‌ಗಳ ಸೋಲಿನ ನಂತರ ಮತ್ತೆ ಪುಟಿದೇಳಲು ಉತ್ಸುಕವಾಗಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>